# ಕನ್ನಡ ಸಾಹಿತ್ಯ ಪರಿಷತ್ತು

ಸ್ಥಾಪನೆ : ೧೯೧೫

ಪಂಪ ಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – ೫೬೦ ೦೧೮
ದೂರವಾಣಿ : ೦೮೦ ೨೬೬೧೨೯೯೧, ೨೬೬೨೩೫೮೪ ಫ್ಯಾಕ್ಸ್ : ೨೬೫೨೩೫೮೬
http://www.kasapa.in e-mail : kannadaparishattu@gmail.com


ಕ್ರಮಸಂಖ್ಯೆ : ಕಸಾಪ / ದತ್ತಿ ಕಾರ್ಯಕ್ರಮ / ೨೦೨೧-೨೨ ದಿನಾಂಕ : ೧೨-೦೧-೨೦೨೨



ಇವರಿಗೆ

ಸಂಪಾದಕರು / ಮುಖ್ಯ ವರದಿಗಾರರು
.......................................ಬೆಂಗಳೂರು

ಮಾನ್ಯರೆ,

## ಪತ್ರಿಕಾ ಹೇಳಿಕೆ – ಪ್ರಕಟಣೆ ಕೃಪೆಗಾಗಿ

**ವಿಶ್ರಾಂತ ಕನ್ನಡ ಪ್ರಾಧ್ಯಾಪಕರು ಹಾಗೂ ವಿಶ್ರಾಂತ ಕುಲಸಚಿವರೂ ಆದ**
**ಪ್ರೊ. ಶಾಂತಿನಾಥ ದಿಬ್ಬದ** ಅವರಿಗೆ
**ಚಾವುಂಡರಾಯ ದತ್ತಿ ಪ್ರಶಸ್ತಿ**

ಕನ್ನಡ ಸಾಹಿತ್ಯ ಪರಿಷತ್ತಿನಲ್ಲಿ **ದಿನಾಂಕ ೧೧-೦೧-೨೦೨೨** ರಂದು **ನಾಡೋಜ ಡಾ. ಮಹೇಶ ಜೋಶಿ ಅವರ ಅಧ್ಯಕ್ಷತೆಯಲ್ಲಿ** ನಡೆದ ಆಯ್ಕೆ ಸಮಿತಿ ಸಭೆಯಲ್ಲಿ **೨೦೨೧ನೆಯ ಸಾಲಿನ "ಚಾವುಂಡರಾಯ ದತ್ತಿ ಪ್ರಶಸ್ತಿ"**ಗೆ ವಿಶ್ರಾಂತ ಕನ್ನಡ ಪ್ರಾಧ್ಯಾಪಕರು ಹಾಗೂ ವಿಶ್ರಾಂತ ಕುಲಸಚಿವರೂ ಆದ **ಪ್ರೊ. ಶಾಂತಿನಾಥ ದಿಬ್ಬದ** ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು. ಪ್ರಶಸ್ತಿಯ ಮೊತ್ತ **ರೂ. ೩೦,೦೦೦ (ಮೂವತ್ತು ಸಾವಿರ ರೂಪಾಯಿ ಮಾತ್ರ)** ನಗದು, ಸ್ಮರಣಿಕೆ ಹಾಗೂ ಫಲ ತಾಂಬೂಲಗಳನ್ನು ಒಳಗೊಂಡಿರುತ್ತದೆ.

ಪ್ರೊ. ಶಾಂತಿನಾಥ ದಿಬ್ಬದ ಅವರು ದೇವಲಾಪುರ, ಬೆಳಗಾವಿ ಜಿಲ್ಲೆಯಲ್ಲಿ ೧೯೫೩ರಲ್ಲಿ ಜನಿಸಿದರು. ಎಂ.ಎ., ಪಿಎಚ್.ಡಿ. ಪದವಿ ಪಡೆದ ಶ್ರೀಯುತರು ಗುಲಬರ್ಗಾ ವಿಶ್ವವಿದ್ಯಾಲಯ, ಕರ್ನಾಟಕ ವಿಶ್ವವಿದ್ಯಾಲಯ ಹಾಗೂ ಬೆಳಗಾವಿಯ ರಾಣಿ ಚನ್ನಮ್ಮ ವಿಶ್ವವಿದ್ಯಾಲಯ ಮಟ್ಟದಲ್ಲಿ ಒಟ್ಟು **೩೨** ವರ್ಷಗಳ ಕಾಲ ಕನ್ನಡ ಪ್ರಾಧ್ಯಾಪಕರಾಗಿ ಸೇವೆ ಸಲ್ಲಿಸಿದ್ದಾರೆ.

ಇದಲ್ಲದೆ, ರಾಜ್ಯದ ಪ್ರಮುಖ ವಿಶ್ವವಿದ್ಯಾಲಯಗಳಲ್ಲಿ ಬೇರೆ ಬೇರೆ ಪಠ್ಯಪುಸ್ತಕ ಸಮಿತಿ, ನೇಮಕಾತಿ ಸಮಿತಿಗಳಂಥ ಉನ್ನತ ಸಮಿತಿಗಳಲ್ಲಿ ಅಧ್ಯಕ್ಷ, ಸದಸ್ಯನಾಗಿ, ಕೇಂದ್ರ ಲೋಕಸೇವಾ ಆಯೋಗದವರು ನಡೆಸುವ ಭಾರತೀಯ ಆಡಳಿತ ಸೇವೆ (ಐ.ಎ.ಎಸ್.) ಮತ್ತು ಕರ್ನಾಟಕ ಲೋಕಸೇವಾ ಆಯೋಗದವರು ನಡೆಸುವ ಕೆ.ಎ.ಎಸ್. ಪರೀಕ್ಷೆಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪಕರಾಗಿಯೂ ಸೇವೆ ಸಲ್ಲಿಸಿದ್ದಾರೆ.

ಪುಟ...೨ಕ್ಕೆ

ಭಾಷೆ ಮತ್ತು ಸಾಹಿತ್ಯ ಸೇವೆಗಾಗಿ ೨೦೧೧ನೆಯ ವರ್ಷದ ಕರ್ನಾಟಕ ಸರ್ಕಾರದ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಶ್ರವಣ ಬೆಳಗೊಳದ ಗೊಮ್ಮಟೇಶ ಪುರಸ್ಕಾರ, ದಕ್ಷಿಣ ಭಾರತ ಜೈನ ಮಹಾಸಭಾ, ಸಾಂಗ್ಲಿ ಇವರ 'ಆಚಾರ್ಯ ಬಾಹುಬಲಿ ಕನ್ನಡ ಸಾಹಿತ್ಯ ಪುರಸ್ಕಾರ ಹಾಗೂ ಆ.ನೇ. ಉಪಾಧ್ಯೆ ಸಂಶೋಧನ ಪ್ರಶಸ್ತಿ ಮುಂತಾದ ಪ್ರಶಸ್ತಿಗಳು ಇವರ ಮುಡಿಗೇರಿವೆ.

ಪಂಪಭಾರತ : ಸಾಂಸ್ಕೃತಿ ಅಧ್ಯಯನ (ಪಿಎಚ್.ಡಿ. ಪ್ರಬಂಧ), ವಾಗ್ದೇವಿಯ ಭಂಡಾರದ ಮುದ್ರೆ, ಜೀವಪರ ಜನಪರ, ಆಗಮಿಕ ಮಹಾಕವಿ ಪಂಪ ಮತ್ತು ಅವನ ಕೃತಿಗಳು, ಜೈನ ಸಂಸ್ಕೃತಿ ಸಮೀಕ್ಷೆ, ಜೈನ ಪುರಾಣಗಳ ಸಂದೇಶ ಮುಂತಾದ **ಸಾಹಿತ್ಯ ಕೃತಿ**ಗಳನ್ನು ಇವರು ಪ್ರಕಟಿಸಿದ್ದಾರೆ.

ಧವಲವಾಣಿ, ಶಾಂತಿ ಸಂದೇಶ, ಜ್ಞಾನಗಂಗಾ, ವೈಜ್ಞಾನಿಕ ಪ್ರಬಂಧಗಳು, ವೈಚಾರಿಕ ಪ್ರಬಂಧಗಳು, ಸರ್ವಜ್ಞ, ಸಮಸ್ತ ಭಾರತ ಇವು ಇವರ **ಸಂಪಾದಿತ ಕೃತಿ**ಗಳಾಗಿವೆ.

ಆಯ್ಕೆ ಸಮಿತಿ ಸಭೆಯಲ್ಲಿ ಸದಸ್ಯರಾದ **ಡಾ. ಪದ್ಮಿನಿ ನಾಗರಾಜು,** ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿಗಳಾದ **ಶ್ರೀ ನೇ. ಭ ರಾಮಲಿಂಗಶೆಟ್ಟಿ,** ಗೌರವ ಕೋಶಾಧ್ಯಕ್ಷರಾದ **ಶ್ರೀ ಪಟೇಲ್‌ಪಾಂಡು** ಅವರುಗಳು ಉಪಸ್ಥಿತರಿದ್ದರು.

**(ನೇ.ಭ. ರಾಮಲಿಂಗಶೆಟ್ಟಿ)**
ಗೌರವ ಕಾರ್ಯದರ್ಶಿಗಳು